# All India Radio: Bangalore
# National Bulletins In Kannada
## 30.07.2025 / 7.35 am
## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು
## 30.07.2025 / 7.35 am

**<><*<><>*><>**

**ಮುಖ್ಯಾಂಶಗಳು**

೧. ಸಂಸತ್ತಿನಲ್ಲಿ ಪಹಲ್ಗಾಮ್ ದಾಳಿ ಕುರಿತು ಮಹತ್ವದ ಚರ್ಚೆ; 'ಆಪರೇಷನ್ ಸಿಂಧೂರ್' ಕಾರ್ಯಾಚರಣೆ ಸ್ಥಗಿತಕ್ಕೆ ವಿಶ್ವದ ಯಾವುದೇ ನಾಯಕರು ಕೋರಿಲ್ಲ- ಪ್ರಧಾನಿ ನರೇಂದ್ರ ಮೋದಿ

೨. ದೇಶ ಯಾವುದೇ ತುರ್ತು ಪರಿಸ್ಥಿತಿಯನ್ನು ಎದುರಿಸಲು ಸನ್ನದ್ಧ- ರಕ್ಷಣಾ ಸಚಿವ ರಾಜನಾಥ್ ಸಿಂಗ್

೩. ಭಾರತ ವಿಶ್ವದ ಅತ್ಯಂತ ಪ್ರಮುಖ ತ್ವರಿತ ಆರ್ಥಿಕ ಬೆಳವಣಿಗೆ ರಾಷ್ಟ್ರ; ಅಂತಾರಾಷ್ಟ್ರೀಯ ಹಣಕಾಸು ನಿಧಿ ವರದಿ

೪. ಮಕಾವು ಓಪನ್ ಬ್ಯಾಡ್ಮಿಂಟನ್ ಟೂರ್ನಿ; ಭಾರತದ ಕ್ರೀಡಾಪಟುಗಳಿಂದ ಉತ್ತಮ ಪ್ರದರ್ಶನ

**<><*<><>*><>**

ಪಹಲ್ಗಾಮ್ ನಲ್ಲಿ ಭಯೋತ್ಪಾದಕರು ಧರ್ಮವನ್ನು ಕೇಳಿ ಪ್ರವಾಸಿಗರನ್ನು ಹತ್ಯೆ ಮಾಡಿದ ಘಟನೆ ಕ್ರೂರತೆಯ ಪರಮಾವಧಿಯಾಗಿದೆ. 'ಆಪರೇಷನ್ ಸಿಂಧೂರ್' ಕಾರ್ಯಾಚರಣೆ ಸ್ಥಗಿತಗೊಳಿಸುವಂತೆ ವಿಶ್ವದ ಯಾವುದೇ ನಾಯಕರು ಭಾರತವನ್ನು ಕೋರಿಲ್ಲ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಸ್ಪಷ್ಟಪಡಿಸಿದ್ದಾರೆ. ಅಮೆರಿಕದ ಒತ್ತಡದ ಮೇರೆಗೆ ಪಾಕಿಸ್ತಾನದೊಂದಿಗೆ ಕದನ ವಿರಾಮಕ್ಕೆ ಒಪ್ಪಿಕೊಂಡಿದೆ ಎಂಬ ವಿರೋಧ ಪಕ್ಷದ ಆರೋಪದ ನಡುವೆಯೇ ನರೇಂದ್ರ ಮೋದಿ ಅವರು ಸರ್ಕಾರದ ನಿಲುವನ್ನು ಸ್ಪಷ್ಟಪಡಿಸಿದ್ದಾರೆ. ಆಪರೇಷನ್ ಸಿಂಧೂರ್ ನಿಲ್ಲಿಸುವಂತೆ ಭಾರತವನ್ನು ಒತ್ತಾಯಿಸಿದ್ದು ಪಾಕಿಸ್ತಾನದ ಕಡೆಯವರು ಎಂದು ಹೇಳಿದರು. ಲೋಕಸಭೆಯಲ್ಲಿ ಆಪರೇಷನ್ ಸಿಂಧೂರ್ ಕುರಿತ ವಿಶೇಷ ಚರ್ಚೆಗೆ ಉತ್ತರಿಸಿದ ಪ್ರಧಾನಿ, ಕಾರ್ಯಾಚರಣೆಯ ಸಮಯದಲ್ಲಿ ಪಾಕಿಸ್ತಾನದ ಆಳದಲ್ಲಿರುವ ಭಯೋತ್ಪಾದಕ ಶಿಬಿರಗಳನ್ನು ಭಾರತ ನಾಶಪಡಿಸಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಪಾಕಿಸ್ತಾನಕ್ಕೆ ಸೂಕ್ತ ಉತ್ತರ ನೀಡಿತು ಎಂದರು. ಭಾರತದ ಮೇಲೆ ಭಯೋತ್ಪಾದಕ ದಾಳಿ ನಡೆದರೆ, ಅದು ತನ್ನದೇ ಆದ ರೀತಿಯಲ್ಲಿ ಪ್ರತಿಕ್ರಿಯಿಸುತ್ತದೆ ಎಂದು ಆಪರೇಷನ್ ಸಿಂಧೂರ್ ಮೂಲಕ ಸಂದೇಶ ನೀಡಿದೆ. ಭಾರತವು ಭಯೋತ್ಪಾದಕರನ್ನು ಬೆಂಬಲಿಸುವ ಸರ್ಕಾರಗಳು ಮತ್ತು ಭಯೋತ್ಪಾದಕ ಮಾಸ್ಟರ್‌ಮೈಂಡ್‌ಗಳನ್ನು ಎರಡು ಪ್ರತ್ಯೇಕ ಘಟಕಗಳಾಗಿ ನೋಡುವುದಿಲ್ಲ ಎಂದು ಅವರು ಒತ್ತಿ ಹೇಳಿದರು. ಭಾರತದಲ್ಲಿ ಹಿಂಸೆಯನ್ನು ಹೆಚ್ಚಿಸಲು ಹಾಗೂ ದೇಶವನ್ನು ಭಯೋತ್ಪಾದನೆಯ ತಾಣವನ್ನಾಗಿಸುವ ಪ್ರಯತ್ನಕ್ಕೆ ಸೋಲಾಗಿದೆ. ಆಪರೇಷನ್ ಸಿಂಧೂರ್ ಮೂಲಕ ಭಯೋತ್ಪಾದಕರು ಹಾಗೂ ಅವರಿಗೆ ಆಶ್ರಯ ನೀಡುವವರಿಗೆ ಸೂಕ್ತ ಉತ್ತರ ನೀಡಲಾಗಿದೆ. ಆಪರೇಷನ್ ಸಿಂಧೂರ್ ಸಮಯದಲ್ಲಿ ಬಳಸಿದ ಮೇಕ್ ಇನ್ ಇಂಡಿಯಾ ಶಸ್ತ್ರಾಸ್ತ್ರಗಳು ಜಾಗತಿಕ ಗಮನಸೆಳೆದಿವೆ ಎಂದರು. ಪಹಲ್ಗಾಮ್ ದಾಳಿ ಮಾಡಿದ ಸಂದರ್ಭದಲ್ಲಿಯೇ ಭಾರತವು ದೊಡ್ಡ ತಂತ್ರ ರೂಪಿಸಲಿದೆ ಎಂದು ಆಗಲೇ ಪಾಕಿಸ್ತಾನಕ್ಕೆ ಮನವರಿಕೆಯಾಗಿತ್ತು. ಹೀಗಾಗಿಯೇ ಅಣುಬಾಂಬ್ ಕುರಿತು ಹೇಳಿಕೆ ನೀಡಲು ಶುರು ಮಾಡಿತ್ತು. ಪಾಕಿಸ್ತಾನದ ಪರಮಾಣು ಬೆದರಿಕೆಗೆ ಮಣಿಯುವುದಿಲ್ಲ ಎಂದು ಭಾರತ ಜಗತ್ತಿಗೆ ತೋರಿಸಿದೆ. ಆದರೆ ಪಾಕಿಸ್ತಾನ ಯಾವುದೇ ಯೋಜನೆ ರೂಪಿಸುವ ಪೂರ್ವದಲ್ಲಿಯೇ, ಅದು ಊಹಿಸಲು ಸಾಧ್ಯವಾಗದ ರೀತಿಯಲ್ಲಿ, ಭಾರತೀಯ ಸೇನೆ ಆಪರೇಷನ್ ಸಿಂಧೂರ್ ಮೂಲಕ ಸೂಕ್ತ ಪ್ರತ್ಯುತ್ತರ ನೀಡಿತ್ತು ಎಂದು ತಿಳಿಸಿದರು. ಆಪರೇಷನ್ ಸಿಂಧೂರ್ ಬಳಿಕ ಭಯೋತ್ಪಾದಕರು ಹಾಗೂ ಅವರಿಗೆ ಆಶ್ರಯ ನೀಡುವವರಿಗೆ ದೊಡ್ಡ ಪಾಠವನ್ನು ಭಾರತ ಕಲಿಸಿದೆ. ಆಪರೇಷನ್ ಸಿಂಧೂರ್, ಭಾರತದ ತಂತ್ರಜ್ಞಾನವನ್ನು ಇಡೀ ವಿಶ್ವಕ್ಕೆ ತೋರಿಸಿಕೊಟ್ಟಿದೆ. ಇಡೀ ವಿಶ್ವ ಭಾರತದತ್ತ ಬೆರಗುಗಣ್ಣುಗಳಿಂದ ನೋಡುವಂತಾಗಿದೆ. ಕಳೆದ ಹತ್ತು ವರ್ಷಗಳಲ್ಲಿ ರಕ್ಷಣಾ ಕ್ಷೇತ್ರದಲ್ಲಿ ನಡೆಯುತ್ತಿರುವ ತಂತ್ರಜ್ಞಾನದ ಪರಿಣಾಮವಾಗಿ ಇಂಥ ಒಂದು ಕಾರ್ಯ ಸಾಧ್ಯವಾಗಿದೆ. ಸಿಂಧೂರದಿಂದ ಸಿಂಧೂರ್ ವರೆಗೆ ಭಾರತವು ಪಾಕಿಸ್ತಾನಕ್ಕೆ ಬಹುದೊಡ್ಡ ಪಾಠ ಕಲಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಇದಕ್ಕೂ ಮೊದಲು ಗೃಹ ಸಚಿವ ಅಮಿತ್ ಶಾ ಮಾತನಾಡಿ,. ದೇಶದ ಭದ್ರತಾ ಪಡೆಗಳು ಭಯೋತ್ಪಾದಕರನ್ನು ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಕಾರ್ಯೋನ್ಮುಖವಾಗಿದೆ. ಆಪರೇಷನ್ ಸಿಂಧೂರ್ ಮೇ ೭ ರಂದು ಬೆಳಗಿನ ಜಾವ ಪ್ರಾರಂಭಿಸಲಾಯಿತು. ಈ ಕಾರ್ಯಾಚರಣೆಯಲ್ಲಿ ಪಾಕಿಸ್ತಾನದ ಒಂಬತ್ತು ಭಯೋತ್ಪಾದಕ ತಾಣಗಳು ನಾಶವಾದವು ಮತ್ತು ೧೦೦ ಕ್ಕೂ ಹೆಚ್ಚು ಭಯೋತ್ಪಾದಕರನ್ನು ತಟಸ್ಥಗೊಳಿಸಲಾಯಿತು. ಈ ದಾಳಿಯಲ್ಲಿ ಯಾವುದೇ ಪಾಕಿಸ್ತಾನಿ ನಾಗರಿಕರು ಸಾವನ್ನಪ್ಪಿಲ್ಲ ಮತ್ತು ಗುರಿಗಳು ಪಾಕಿಸ್ತಾನದ ಒಳಗೆ ೧೦೦ ಕಿಲೋಮೀಟರ್ ದೂರದಲ್ಲಿತ್ತು ಎಂದು ಹೇಳಿದರು. ಭಯೋತ್ಪಾದಕರು ಪಾಕಿಸ್ತಾನದವರು ಎಂಬುದಕ್ಕೆ ಪುರಾವೆ ಕೋರಿ ಪಾಕಿಸ್ತಾನಕ್ಕೆ ಕ್ಲೀನ್ ಚಿಟ್ ನೀಡಿದ ಮಾಜಿ ಗೃಹ ಸಚಿವ ಪಿ. ಚಿದಂಬರಂ ಅವರನ್ನು ಅಮಿತ್ ಶಾ ಟೀಕಿಸಿದರು. ಆಪರೇಷನ್ ಸಿಂಧೂರ್ ಇಡೀ ಪ್ರಪಂಚದ ಮುಂದೆ ಪಾಕಿಸ್ತಾನದ ಮುಖವಾಡವನ್ನು ಬಯಲು ಮಾಡಿದೆ. ಪಾಕಿಸ್ತಾನದ ಡಿಜಿಎಂಒ ಮೇ ೧೦ ರಂದು ಭಾರತದ ಡಿಜಿಎಂಒಗೆ ಕರೆ ಮಾಡಿದ ನಂತರ ಕದನ ವಿರಾಮ ಘೋಷಿಸಲಾಯಿತು ಎಂದು ಅವರು ಹೇಳಿದರು. ಚರ್ಚೆಯಲ್ಲಿ ಭಾಗವಹಿಸಿದ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಪಾಕಿಸ್ತಾನವು ನಿರ್ದಯ ದಾಳಿಯನ್ನು ಆಯೋಜಿಸಿದೆ. ಆಪರೇಷನ್ ಸಿಂಧೂರ್ ಸಮಯದಲ್ಲಿ, ವಿರೋಧ ಪಕ್ಷಗಳು ಸರ್ಕಾರದೊಂದಿಗೆ ಬಂಡೆಯಂತೆ ನಿಂತಿತ್ತು. ಆದರೆ ಹೋರಾಟ ಮಾಡಲು ಕೇಂದ್ರದ ಇಚ್ಛಾಶಕ್ತಿಯ ಕೊರತೆ ಕಂಡು

ಬಂದಿತ್ತು ಎಂದು ಅವರು ಆರೋಪಿಸಿದರು. ಸಮಾಜವಾದಿ ಪಕ್ಷದ ಅಖಿಲೇಶ್ ಯಾದವ್ ಮಾತನಾಡಿ, ಕದನ ವಿರಾಮಕ್ಕೆ ಯಾವ ಒತ್ತಡ ಕಾರಣವಿತ್ತು. ಪಹಲ್ಗಾಮ್ ಘಟನೆಯು ನಾಗರಿಕರ ಸುರಕ್ಷತೆಗೆ ಹಾನಿಕಾರಕವೆಂದು ಸಾಬೀತುಪಡಿಸಿದೆ ಎಂದು ಅವರು ಹೇಳಿದರು. ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ಕೂಡ ಸಶಸ್ತ್ರ ಪಡೆಗಳ ಪಾತ್ರವನ್ನು ಶ್ಲಾಘಿಸಿದರು. ಪಹಲ್ಗಾಮ್ ದಾಳಿ ಏಕೆ ಸಂಭವಿಸಿತು ಎಂದು ಅವರು ಪ್ರಶ್ನಿಸಿದರು, ಜಮ್ಮು ಮತ್ತು ಕಾಶ್ಮೀರದಲ್ಲಿ ಭದ್ರತೆಯನ್ನು ಕಾಪಾಡಿಕೊಳ್ಳಲು ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು. ಶಿವಸೇನೆಯ ಶ್ರೀಕಾಂತ್ ಶಿಂಧೆ ಎನ್.ಡಿ.ಎ ಸರ್ಕಾರಕ್ಕೆ ಧನ್ಯವಾದ ಅರ್ಪಿಸಿದರು. ಭಯೋತ್ಪಾದನೆಯ ಬಗ್ಗೆ ಸಂವೇದನಾಶೀಲರಾಗುವಲ್ಲಿ ಭಾರತವು ದೊಡ್ಡ ಪಾತ್ರವನ್ನು ವಹಿಸುತ್ತಿದೆ ಎಂದರು.

<><*<><>*><>

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಭಾರತ ನಡೆಸಿದ ಬಲವಾದ, ಯಶಸ್ವಿ ಮತ್ತು ನಿರ್ಣಾಯಕ ಆಪರೇಷನ್ ಸಿಂಧೂರ್ ಕುರಿತು ರಾಜ್ಯಸಭೆಯಲ್ಲಿ ನಿನ್ನೆ ವಿಶೇಷ ಚರ್ಚೆ ಆರಂಭಿಸಲಾಗಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಚರ್ಚೆಯಲ್ಲಿ ಪಾಲ್ಗೊಂಡು, ಭಯೋತ್ಪಾದಕ ಅಡಗುತಾಣಗಳನ್ನು ನಾಶಪಡಿಸುವುದು ಮತ್ತು ಭಾರತ ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆಯನ್ನು ಅಳವಡಿಸಿಕೊಳ್ಳುತ್ತದೆ ಎಂಬ ಸ್ಪಷ್ಟ ಸಂದೇಶವನ್ನು ಕಳುಹಿಸುವುದು ಆಪರೇಷನ್ ಸಿಂದೂರ್‌ನ ಉದ್ದೇಶವಾಗಿದೆ. ದೇಶದ ಭವಿಷ್ಯವನ್ನು ರೂಪಿಸುವಲ್ಲಿ ಆಪರೇಷನ್ ಸಿಂದೂರ್‌ನ ಪಾತ್ರ ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದರು. ಅಮಾಯಕರ ಜೀವಗಳನ್ನು ತೆಗೆದುಕೊಂಡರೆ ಅವರ ಅಡಗುತಾಣಗಳು ನಾಶವಾಗುತ್ತವೆ. ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲಿನ ಹೇಡಿತನದ ದಾಳಿಗೆ ಪ್ರತೀಕಾರವಾಗಿ, ಭಾರತೀಯ ಸಶಸ್ತ್ರ ಪಡೆಗಳು ಪಾಕಿಸ್ತಾನಕ್ಕೆ ಸೂಕ್ತ ಉತ್ತರ ನೀಡಿ ೧೦೦ ಕ್ಕೂ ಹೆಚ್ಚು ಭಯೋತ್ಪಾದಕರನ್ನು ಕೊಂದಿವೆ. ಭವಿಷ್ಯದಲ್ಲಿ ಪಾಕಿಸ್ತಾನ ಯಾವುದೇ ದುಸ್ಸಾಹಸಕ್ಕೆ ಮುಂದಾದರೆ, ಆಪರೇಷನ್ ಸಿಂಧೂರ್ ಅನ್ನು ಪುನರಾರಂಭಿಸಲು ದೇಶ ಹಿಂಜರಿಯುವುದಿಲ್ಲ. ಯಾವುದೇ ತುರ್ತು ಪರಿಸ್ಥಿತಿಯನ್ನು ಎದುರಿಸಲು ದೇಶ ಸನ್ನದ್ಧವಾಗಿದೆ ಎಂದು ಹೇಳಿದರು. ಚರ್ಚೆಯಲ್ಲಿ ಭಾಗವಹಿಸಿದ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಆಪರೇಷನ್ ಸಿಂಧೂರ್ ಸಮಯದಲ್ಲಿ ಕದನ ವಿರಾಮ ಘೋಷಣೆ ಮಾಡಿದ ಕ್ರಮವನ್ನು ಪ್ರಶ್ನಿಸಿದರು. ಉರಿ, ಪುಲ್ವಾಮಾ ಮತ್ತು ಈಗ ಪಹಲ್ಗಾಮ್ ದಾಳಿಯು ಗುಪ್ತಚರ ವೈಫಲ್ಯವನ್ನು ತೋರಿಸುತ್ತದೆ ಎಂದು ಹೇಳಿದರು.

<><*<><>*><>

ಅಂತರರಾಷ್ಟ್ರೀಯ ಹಣಕಾಸು ನಿಧಿ-ಐಎಂಎಫ್ ೨೦೨೫ ಮತ್ತು ೨೦೨೬ರ ಆರ್ಥಿಕ ವರ್ಷದಲ್ಲಿ ಭಾರತದ ಆರ್ಥಿಕ ಬೆಳವಣಿಗೆಯ ದರ ಶೇಕಡಾ ೬.೪ ಕ್ಕೆ ಪರಿಷ್ಕರಿಸಿದೆ. ಈ ವರ್ಷದ ಏಪ್ರಿಲ್‌ನ ವಿಶ್ವ ಆರ್ಥಿಕ ಮುನ್ನೋಟದಲ್ಲಿ, ಐಎಂಎಫ್ ಭಾರತದ ಜಿಡಿಪಿ ಬೆಳವಣಿಗೆಯನ್ನು ೨೦೨೫ ಕ್ಕೆ ಶೇಕಡಾ ೬.೨ ಮತ್ತು ೨೦೨೬ ಕ್ಕೆ ಶೇಕಡಾ ೬.೩ ಎಂದು ಅಂದಾಜಿಸಿತ್ತು. ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಭಾರತ ಬೆಳೆಯುತ್ತಿದೆ ಎಂದು ವರದಿ ತಿಳಿಸಿದೆ.

<><*<><>*><>

ಇಸ್ರೊ ಮತ್ತು ನಾಸಾ ಸಂಸ್ಥೆ ಜಂಟಿಯಾಗಿ ಅಭಿವೃದ್ಧಿಪಡಿಸಿರುವ ಭೂ ಸಮೀಕ್ಷೆಯ ಸಿಂಥೆಟಿಕ್ ಅಪರ್ಚರ್ ರೇಡಾರ್ -ನಿಸಾರ್ ಉಪಗ್ರಹವನ್ನು ಇಂದು ಸಂಜೆ ೫.೪೦ಕ್ಕೆ ಉಡ್ಡಯನ ಮಾಡಲಾಗುವುದು ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ- ಇಸ್ರೋ ತಿಳಿಸಿದೆ.

<><*<><>*><>

ಮಕಾವು ಓಪನ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಭಾರತವು ವಿವಿಧ ವಿಭಾಗಗಳಲ್ಲಿ ಹಲವಾರು ಅದ್ಭುತ ಪ್ರದರ್ಶನಗಳೊಂದಿಗೆ ಉತ್ತಮ ಆರಂಭ ಪಡೆದಿದೆ. ಪುರುಷರ ಡಬಲ್ಸ್‌ನಲ್ಲಿ, ಸ್ಟಾರ್ ಜೋಡಿ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಮಲೇಷ್ಯಾದ ಲೋ ಹ್ಯಾಂಗ್ ಯೀ ಮತ್ತು ಎನ್‌ಜಿ ಎಂಗ್ ಚಿಯೊಂಗ್ ವಿರುದ್ಧ ೨೧-೧೩, ೨೧-೧೫ ಅಂತರದಲ್ಲಿ ಜಯಗಳಿಸಿ ಎರಡನೇ ಸುತ್ತಿಗೆ ಪ್ರವೇಶಿಸಿದರು. ಮಹಿಳಾ ಸಿಂಗಲ್ಸ್‌ನಲ್ಲಿ, ಅನ್ಮೋಲ್ ಖಾರ್ಬ್ ಮತ್ತು ತಸ್ನಿಮ್ ಮಿರ್ ತಮ್ಮ ಅರ್ಹತಾ ಸುತ್ತಿನ ಪಂದ್ಯಗಳನ್ನು ಗೆದ್ದ ನಂತರ ಮುಖ್ಯ ಸುತ್ತಿಗೆ ಮುನ್ನಡೆದರು. ಅನ್ಮೋಲ್, ಅಜೆರ್ಬೈಜಾನ್‌ನ ಕೀಶಾ ಫಾತಿಮಾ ಅಝುಹ್ರಾ ಅವರನ್ನು ೨೧-೧೧, ೨೧-೧೩ ಅಂತರದಲ್ಲಿ ಸೋಲಿಸಿದರೆ, ತಸ್ನಿಮ್, ಥೈಲ್ಯಾಂಡ್‌ನ ಟಿಡಾಪೊರ್ನ್ ಕ್ಲೀಬಿಯೀಸನ್ ಅವರನ್ನು ೨೧-೧೪, ೧೩-೨೧, ೨೧-೧೭ ಅಂತರದಲ್ಲಿ ಸೋಲಿಸಿದರು. ಪುರುಷರ ಡಬಲ್ಸ್ ಅರ್ಹತಾ ಸುತ್ತಿನಲ್ಲಿ, ಡಿಂಗು ಸಿಂಗ್ ಕೊಂಥೌಜಮ್ ಮತ್ತು ಅಮಾನ್ ಮೊಹಮ್ಮದ್, ಹಾಂಗ್ ಕಾಂಗ್ ಜೋಡಿಯನ್ನು ೨೧-೧೮, ೨೧-೧೭ ಅಂತರದಲ್ಲಿ ಸೋಲಿಸಿ ಮುಖ್ಯ ಸುತ್ತಿನಲ್ಲಿ ಸ್ಥಾನ ಪಡೆದರು. ತಂಡ್ರುಂಗಿಣಿ ಹೇಮಾ ನಾಗೇಂದ್ರ ಬಾಬು ಮತ್ತು ಪ್ರಿಯಾ ಕೊಂಜೆಂಗ್‌ಬಮ್ ಮುಖ್ಯ ಸುತ್ತಿಗೆ ಪ್ರವೇಶಿಸುವುದರೊಂದಿಗೆ ಭಾರತ ಮಿಶ್ರ ಡಬಲ್ಸ್‌ನಲ್ಲೂ ಯಶಸ್ಸು ಕಂಡಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**